## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಈಸ್ಟ್ ಪಾಯಿಂಟ್ ಕಾಲೇಜ್ ಆಫ್ ಫಾರ್ಮಸಿ, ಬೆಂಗಳೂರು ಇಲ್ಲಿಗೆ 2010-11 ನೇ ಶೈಕ್ಷಣಿಕ ಸಾಲಿನಿಂದ ಎಂ.ಫಾರ್ಮ ಕೋರ್ಸ್‌ಗಳನ್ನು ಹೊಸದಾಗಿ ಪ್ರಾರಂಭಿಸಲು ಅನುಮತಿ ನೀಡುವ ಬಗ್ಗೆ.

ಓದಲಾಗಿದೆ: ರಿಜಿಸ್ಟ್ರಾರ್, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು ಇವರ ಪತ್ರ ಸಂಖ್ಯೆ:ಎಸಿಎ/ಪಿಜಿಎಫ್-65/2010-11, ದಿನಾಂಕ: 23-11-2010.

ಪ್ರಸ್ತಾವನೆ:

ಮೇಲೆ ಓದಲಾದ ಪತ್ರದಲ್ಲಿ, ರಿಜಿಸ್ಟ್ರಾರ್, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, 4ನೇ 'ಟಿ' ಬ್ಲಾಕ್, ಜಯನಗರ, ಬೆಂಗಳೂರು ಇವರು ಈಸ್ಟ್ ಪಾಯಿಂಟ್ ಕಾಲೇಜ್ ಆಫ್ ಫಾರ್ಮಸಿ, ಬೆಂಗಳೂರು ಇಲ್ಲಿ 2010-11 ನೇ ಸಾಲಿನಿಂದ ಎಂ.ಫಾರ್ಮ (ಫಾರ್ಮಾಸ್ಯೂಟಿಕ್ಸ್) ಮತ್ತು (ಫಾರ್ಮಾಕಾಲಜಿ) ಕೋರ್ಸ್‌ಗಳನ್ನು ತಲಾ 18 ಸೀಟುಗಳ ಪ್ರವೇಶ ಮಿತಿಯೊಂದಿಗೆ ಕೆಲವೊಂದು ಷರತ್ತುಗಳಿಗೆ ಒಳಪಡಿಸಿ ಹೊಸದಾಗಿ ಪ್ರಾರಂಭಿಸಲು ಶೈಕ್ಷಣಿಕ ಪರಿಷತ್ ಹಾಗೂ ಸಿಂಡಿಕೇಟ್ ತೆಗೆದುಕೊಂಡ ನಿರ್ಣಯದ ಪ್ರತಿಗಳನ್ನು ಲಗತ್ತಿಸಿ ಕಳುಹಿಸುತ್ತಾ ಶಿಫಾರಸ್ಸು ಮಾಡಿದ್ದಾರೆ.

ಪ್ರಸ್ತಾವನೆಯನ್ನು ಸರ್ಕಾರವು ಪರಿಶೀಲಿಸಿದೆ. ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಆಕುಕ 401 ಪಿಟಿಡಿ 2011**
**ಬೆಂಗಳೂರು, ದಿನಾಂಕ:21-10-2011**

1994 ರ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅಧಿನಿಯಮದ 45(5) ನೇ ಪ್ರಕರಣದಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಈಸ್ಟ್ ಪಾಯಿಂಟ್ ಕಾಲೇಜ್ ಆಫ್ ಫಾರ್ಮಸಿ, ಬೆಂಗಳೂರು ಇಲ್ಲಿ 2010-11 ನೇ ಶೈಕ್ಷಣಿಕ ಸಾಲಿನಿಂದ ಎಂ.ಫಾರ್ಮ (ಫಾರ್ಮಾಸ್ಯೂಟಿಕ್ಸ್) ಮತ್ತು (ಫಾರ್ಮಾಕಾಲಜಿ) ಕೋರ್ಸ್‌ಗಳನ್ನು ತಲಾ 18 ಸೀಟುಗಳ ಪ್ರವೇಶ ಮಿತಿಯೊಂದಿಗೆ ಹೊಸದಾಗಿ ಪ್ರಾರಂಭಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸರ್ಕಾರದ ಅನುಮತಿ ನೀಡಲಾಗಿದೆ ಹಾಗೂ ಸಂಯೋಜನೆ ನೀಡಲು ಶಿಫಾರಸ್ಸು ಮಾಡಲಾಗಿದೆ.

1) ಸಂಯೋಜನೆಯ ಬಗ್ಗೆ ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತಿನ ಅನುಮತಿ ಪಡೆಯತಕ್ಕದ್ದು.
2) ಸಂಯೋಜನೆಯ ಬಗ್ಗೆ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅನುಮತಿ ಪಡೆಯತಕ್ಕದ್ದು.
3) ಸರ್ಕಾರದ ಸೀಟುಗಳ ಹಂಚಿಕೆಯಲ್ಲಿ ಪ್ರವೇಶಾವಕಾಶಕ್ಕೆ ಹಾಲಿ ಜಾರಿಯಲ್ಲಿರುವ ನಿಯಮಗಳಿಗೆ ಸಂಸ್ಥೆಯು ಬದ್ಧವಾಗಿರಬೇಕು.
4) ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ / ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತು ನಿಗಧಿಪಡಿಸಿರುವ ಪರಿನಿಯಮಾವಳಿಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
5) ರಾಜ್ಯ ಸರ್ಕಾರವು ಕಾಲ-ಕಾಲಕ್ಕೆ ನೀಡುವ ಸೂಚನೆ ಹಾಗೂ ಆದೇಶಗಳನ್ನು ಪಾಲಿಸತಕ್ಕದ್ದು.